ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ: 080-22278803
ಅಂತರ್ಜಾಲ: https://kptcl.karnataka.gov.in/
ಮಿಂಚಂಚೆ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

**Corporate Identity Number (CIN): U40109KA1999SGC025521**

**(ಕಂಪನಿಯ ಅಧಿಕೃತ ಕಚೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009)**

---

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ4(ಇ)/ಎಸ್‌ಆರ್‌ಎಸ್/2020 ದಿನಾಂಕ: 22.07.2020.
2. ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/9457/2019-20 ದಿನಾಂಕ: 20.08.2020.
3. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಆಇ 02 ಸೇನಿಸೇ 2022 ದಿನಾಂಕ: 27.01.2022.

**ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/9457/2019-20 ಬೆಂಗಳೂರು, ದಿನಾಂಕ:** - 5 FEB 2022

ರಾಜ್ಯದಲ್ಲಿ ಕೋವಿಡ್-19 ರೋಗದ ಪ್ರತಿರೋಧಕ ಲಸಿಕೆ ಚುಚ್ಚುಮದ್ದು ನೀಡಲಾಗಿರುವ ಹಿನ್ನೆಲೆಯಲ್ಲಿ ಈ ರೋಗದ ತೀವ್ರತೆಯು ಪ್ರಸ್ತುತ ಇಳಿಮುಖವಾಗಿದ್ದು, ಇದಕ್ಕೆ ತುತ್ತಾದವರು ಚಿಕಿತ್ಸೆ ಪಡೆದು ಗುಣಮುಖರಾಗುತ್ತಿರುವ ಪ್ರಮಾಣದಲ್ಲಿಯೂ ಗಣನೀಯವಾದ ಬದಲಾವಣೆ ಆಗಿರುವುದನ್ನು ಪರಿಗಣಿಸಿ, ಕೋವಿಡ್-19 ಸಂಬಂಧ ಮುಂಜಾಗ್ರತಾ ಕ್ರಮದ ಮಾರ್ಗಸೂಚಿಯನ್ನು ಮಾರ್ಪಡಿಸಿ ಆದೇಶಿಸಿರುವುದನ್ನು ಗಮನದಲ್ಲಿಟ್ಟುಕೊಂಡು ಕೋವಿಡ್-19 ರೋಗದಿಂದ ಸೋಂಕಿತ ನೌಕರರಿಗೆ ಸಂದರ್ಭಾನುಸಾರ ವಿಶೇಷ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡಿ ಹೊರಡಿಸಲಾಗಿರುವ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಆಇ 02 ಸೇನಿಸೇ 2022 ದಿನಾಂಕ: 27.01.2022 ನ್ನು ನಿಗಮದಲ್ಲಿ ಅಳವಡಿಸಿಕೊಳ್ಳಲಾಗಿದೆ.

ಸರ್ಕಾರದ ದಿನಾಂಕ: 27.01.2022 ರ ಸದರಿ ಅಧಿಕೃತ ಜ್ಞಾಪನದ ಪ್ರತಿಯನ್ನು ಈ ಆದೇಶಕ್ಕೆ 'ಅನುಬಂಧ' ಎಂದು ಲಗತ್ತಿಸಲಾಗಿದೆ.

ನಿರ್ದೇಶಕರು
(ಆಡಳಿತ ಮತ್ತು ಮಾನವ ಸಂಪನ್ಮೂಲ)

**ಗೆ:**

1. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ/ಜೆಸ್ಕಾಂ/ಹೆಸ್ಕಾಂ/ಮೆಸ್ಕಾಂ/ಸೆಸ್ಕ್/ಪಿ.ಸಿ.ಕೆ.ಎಲ್.
2. ಎಲ್ಲಾ ನಿರ್ದೇಶಕರು (ತಾಂತ್ರಿಕ), ಎಸ್ಕಾಂಗಳು.
3. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂಗಳು.
4. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ/ಎಸ್ಕಾಂಗಳು.
5. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ಪ್ರಸರಣ)/ನಿರ್ದೇಶಕರು (ಹಣಕಾಸು)/ನಿರ್ದೇಶಕರು (ಆಡಳಿತ ಮತ್ತು ಮಾನವ ಸಂಪನ್ಮೂಲ), ಕವಿಪ್ರನಿನಿ.

   https://kptcl.karnataka.gov.in/ for information of:

6. ಎಲ್ಲಾ ಅಧೀಕ್ಷಕ ಇಂಜಿನಿಯರ್ (ವಿ)/ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
7. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್ (ವಿ)/ಉಪ ಲೆಕ್ಕನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
8. ಎಲ್ಲಾ ಅಧಿಕಾರಿಗಳು, ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

**ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ:-**

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ (ನೋಂದಣಿ ಸಂಖ್ಯೆ: 659), ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
2. ಶ್ರೀ.ಟಿ.ಎಂ.ಶಿವಪ್ರಕಾಶ್, ಅಧ್ಯಕ್ಷರು, ಕವಿಮಂ ಇಂಜಿನಿಯರ್‌ಗಳ ಸಂಘ, ಬೆಂಗಳೂರು, ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ(ನೋಂದಣಿ ಸಂಖ್ಯೆ: 659), ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ(ರಿ), ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಡಿಪ್ಲೋಮಾ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂ ಪ.ಜಾ/ಪ.ಪಂ ಅಧಿಕಾರಿಗಳ ಸಂಘ, ಬೆಂಗಳೂರು.
9. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಪಿಂಚಣಿದಾರರ ಸಂಘ, ಕಾವೇರಿಭವನ, ಬೆಂಗಳೂರು.

ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/9457/2019–20 ಬೆಂಗಳೂರು, ದಿನಾಂಕ: .02.2022 ರ ಅನುಬಂಧ

## ಕರ್ನಾಟಕ ಸರ್ಕಾರ

ಸಂಖ್ಯೆ: ಆಇ 02 ಸೇನಿಸೇ 2022

ಕರ್ನಾಟಕ ಸರ್ಕಾರ ಸಚಿವಾಲಯ
ವಿಧಾನ ಸೌಧ,
ಬೆಂಗಳೂರು, ದಿನಾಂಕ: 27/01/2022

### ಅಧಿಕೃತ ಜ್ಞಾಪನ

ವಿಷಯ: ಕೋವಿಡ್–19 ಸಾಂಕ್ರಾಮಿಕ ರೋಗಕ್ಕೆ ಒಳಪಟ್ಟ ರಾಜ್ಯ ಸರ್ಕಾರಿ ನೌಕರರಿಗೆ ವಿಶೇಷ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡುವ ಬಗ್ಗೆ.

ಉಲ್ಲೇಖ:
1. ದಿನಾಂಕ: 22/07/2020 ರ ಸಂಖ್ಯೆ: ಎಫ್‌ಡಿ 04(ಇ) ಎಸ್‌ಆರ್‌ಎಸ್ 2020 ರ ಸರ್ಕಾರಿ ಆದೇಶ.
2. ದಿನಾಂಕ: 29/08/2020 ರ ಸಂಖ್ಯೆ: ಆಇ 04(ಇ) ಸೇನಿಸೇ 2020 ರ ಸರ್ಕಾರದ ಅಧಿಕೃತ ಜ್ಞಾಪನ.
3. ಸರ್ಕಾರದ ಮುಖ್ಯ ಕಾರ್ಯದರ್ಶಿ ಹಾಗೂ ಅಧ್ಯಕ್ಷರು, ರಾಜ್ಯ ನಿರ್ವಹಣೆ ಸಮಿತಿ ಇವರ ದಿನಾಂಕ: 21/01/2022 ರ ಆದೇಶ ಸಂಖ್ಯೆ: ಆರ್‌ಡಿ 158 ಟಿಎನ್‌ಆರ್ 2020.

*******

ಕೋವಿಡ್–19 ಸಾಂಕ್ರಾಮಿಕ ರೋಗದಿಂದ ಸೋಂಕಿತ ರಾಜ್ಯ ಸರ್ಕಾರಿ ನೌಕರರಿಗೆ ವಿಶೇಷ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡುವ ಕುರಿತು ಉಲ್ಲೇಖ (1) ರ ಸರ್ಕಾರಿ ಆದೇಶದಲ್ಲಿ ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಯ ಅನೆಕ್ಸರ್–"ಬಿ" ರಲ್ಲಿನ ನಿಯಮ 4ಕ್ಕೆ ಸೇರ್ಪಡೆಗೊಳಿಸಲಾಗಿರುತ್ತದೆ ಹಾಗೂ ಈ ಸಂಬಂಧ ಉಲ್ಲೇಖ (2) ರ ಅಧಿಕೃತ ಜ್ಞಾಪನದಲ್ಲಿ ಸ್ಪಷ್ಟೀಕರಿಸಲಾಗಿರುತ್ತದೆ.

ರಾಜ್ಯದಲ್ಲಿ ಕೋವಿಡ್–19 ರೋಗದ ಪ್ರತಿರೋಧಕ ಲಸಿಕೆ ಚುಚ್ಚುಮದ್ದು ನೀಡಲಾಗಿರುವ ಹಿನ್ನೆಲೆಯಲ್ಲಿ ಈ ರೋಗದ ತೀವ್ರತೆಯು ಪ್ರಸ್ತುತ ಇಳಿಮುಖವಾಗಿದ್ದು, ಇದಕ್ಕೆ ತುತ್ತಾದವರು ಚಿಕಿತ್ಸೆ ಪಡೆದು ಗುಣಮುಖರಾಗುತ್ತಿರುವ ಪ್ರಮಾಣದಲ್ಲಿಯೂ ಗಣನೀಯವಾದ ಬದಲಾವಣೆ ಆಗಿರುವುದನ್ನು ಪರಿಗಣಿಸಿ ಉಲ್ಲೇಖ (3) ರಂತೆ ಕೋವಿಡ್–19 ಸಂಬಂಧ ಮುಂಜಾಗ್ರತಾ ಕ್ರಮದ ಮಾರ್ಗಸೂಚಿಯನ್ನು ಮಾರ್ಪಡಿಸಿ ಆದೇಶಿಸಿರುವುದನ್ನು ಗಮನದಲ್ಲಿಟ್ಟುಕೊಂಡು, ಕೋವಿಡ್–19 ರೋಗದಿಂದ ಸೋಂಕಿತ ರಾಜ್ಯ ಸರ್ಕಾರಿ ನೌಕರರಿಗೆ ಸಂದರ್ಭಾನುಸಾರ ವಿಶೇಷ ಸಾಂದರ್ಭಿಕ ರಜೆಯನ್ನು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರವು ಈ ಕೆಳಕಂಡಂತೆ ಮಂಜೂರು ಮಾಡಬಹುದಾಗಿದೆ:

1. ಸರ್ಕಾರಿ ನೌಕರ ಅಥವಾ ಆತನ ಕುಟುಂಬದ ಸದಸ್ಯರು ಕೋವಿಡ್–19 ಸಾಂಕ್ರಾಮಿಕ ರೋಗಕ್ಕೆ ಒಳಪಟ್ಟ ಸಂದರ್ಭದಲ್ಲಿ ಹಾಗೂ ಸರ್ಕಾರಿ ನೌಕರನು ವಾಸಿಸುವ ಪ್ರದೇಶವನ್ನು ಕಂಟೇನ್ಮೆಂಟ್ ಪ್ರದೇಶವೆಂದು ಘೋಷಿಸಿ ಸಾರ್ವಜನಿಕ ಸಂಚಾರದಲ್ಲಿ ಯಾವುದೇ ನಿರ್ಬಂಧ ವಿಧಿಸಿದ್ದಲ್ಲಿ ಅಂತಹ ಸರ್ಕಾರಿ ನೌಕರನಿಗೆ ಗರಿಷ್ಠ 7 ದಿನಗಳ (ಏಳು ದಿನಗಳು) ವಿಶೇಷ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡಬಹುದು.

2. ಸದರಿ ರಜೆಯ ಮೇಲಿರುವ ಸರ್ಕಾರಿ ನೌಕರನು ಕಚೇರಿಯ ತುರ್ತು ಕೆಲಸಗಳ ನಿರ್ವಹಣೆಗೆ ಸಂಬಂಧಿಸಿದಂತೆ ಸಕ್ಷಮ ಪ್ರಾಧಿಕಾರವು ದೂರವಾಣಿ, ಆನ್‌ಲೈನ್ ಮೂಲಕ ನೀಡುವ ಸೂಚನೆಗಳನ್ನು ಪಾಲಿಸುವುದಕ್ಕೆ ಬದ್ಧನಾಗಿರತಕ್ಕದ್ದು.

3. ಈ ಸೂಚನೆಗಳು ತಕ್ಷಣದಿಂದ ಅನ್ವಯಿಸಿ ಮುಂದಿನ ಆದೇಶದವರೆಗೆ ಜಾರಿಯಲ್ಲಿರುತ್ತವೆ.

27.1.22

(ಅಜಯ್ ಎಸ್. ಕೊರಡೆ)
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಸೇವೆಗಳು-1).

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಇವರಿಗೆ-ಮುಂದಿನ ಕರ್ನಾಟಕ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಲು.

ಪ್ರತಿ ಇವರಿಗೆ:

1. ಪ್ರಧಾನ ಮಹಾಲೇಖಪಾಲರು (G & SSA), ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್ ಬಾಕ್ಸ್ ಸಂಖ್ಯೆ-5398, ಬೆಂಗಳೂರು-560001.
2. ಮಹಾಲೇಖಪಾಲರು (E & RSA), ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಪೋಸ್ಟ್ ಬಾಕ್ಸ್ ಸಂಖ್ಯೆ-5398, ಬೆಂಗಳೂರು-560001.
3. ಮಹಾಲೇಖಪಾಲರು (A & E), ಕರ್ನಾಟಕ ಪೋಸ್ಟ್ ಬಾಕ್ಸ್ ಸಂಖ್ಯೆ-5329/5369, ಪಾರ್ಕ್‌ಹೌಸ್ ರೋಡ್, ಬೆಂಗಳೂರು.
4. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
6. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ.
7. ಎಲ್ಲಾ ಜಿಲ್ಲಾಧಿಕಾರಿಗಳು.
8. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗ.
9. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
10. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
12. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
14. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ಬೆಂಗಳೂರು.
15. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
16. ಯೋಜನಾ ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
17. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145 "A" ಬಹುಮಹಡಿಗಳ ಕಟ್ಟಡ, ಬೆಂಗಳೂರು.
18. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
19. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
20. ಕರ್ನಾಟಕ ಸರ್ಕಾರಿ ಸಚಿವಾಲಯದ ಎಲ್ಲಾ ಶಾಖೆಗಳು.
21. ಕರ್ನಾಟಕ ಸರ್ಕಾರಿ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
22. ವಾರಪತ್ರ/ಶಾಖೆಯ ರಕ್ಷಾ ಕಡತ.

ಕ್ರಮ ಸಂಖ್ಯೆ:1 ರಿಂದ 18 ರವರೆಗೆ ನಮೂದಿತವಾದ ಅಧಿಕಾರಿಗಳಿಗೆ ಪತ್ರದ ಮೂಲಕ।
ಕರ್ನಾಟಕ ಸರ್ಕಾರದ ಅಧಿಕೃತ ಅಂತರ್ಜಾಲ ತಾಣ www.finance.karnataka.gov.in ವೀಕ್ಷಿಸಿ.